ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 31/05/2019

# 29ಕ್ಕೆ 63 ನಗರ ಸ್ಥಳೀಯ ಸಂಸ್ಥೆ ಚುನಾವಣೆ

25-5-2019

ಸಂ.ಕ. ಸಮಾಚಾರ ಬೆಂಗಳೂರು

ರಾಜ್ಯದ 63 ನಗರ ಸ್ಥಳೀಯ ಸಂಸ್ಥೆಗಳಿಗೆ ಸಾರ್ವತ್ರಿಕ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಮೇ 29ರಂದು ಚುನಾವಣೆ ನಡೆಯಲಿದೆ.

ಇದೇ ವೇಳೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ತೆರವಾದ ಸದಸ್ಯ ಸ್ಥಾನಗಳಿಗೆ ಉಪ-ಚುನಾವಣೆಯನ್ನು ನಡೆಸಲು ರಾಜ್ಯ ಚುನಾವಣಾ ಆಯೋಗ ನಿರ್ದೇಶನ ನೀಡಿದೆ.

ಮತದಾರರಿಗೆ ಮತದಾನ ಮಾಡಲು ಅವಕಾಶವಾಗುವಂತೆ, ಸಾರ್ವತ್ರಿಕ ಚುನಾವಣೆ ನಡೆಯುವ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾಗೂ ಉಪಚುನಾವಣೆ ನಡೆಯುವ ಆಯಾಯ ನಗರ ಸ್ಥಳೀಯ ಸಂಸ್ಥೆಯ ಆಯಾ ವಾರ್ಡ್‌ನ ವ್ಯಾಪ್ತಿಯಲ್ಲಿ ಹಾಗು ಉಪ-ಚುನಾವಣೆ ನಡೆಯುವ ತಾಪಂ ಮತ್ತು ಉಪ ಚುನಾವಣೆ ನಡೆಯುವ ಗ್ರಾಪಂಗಳ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಒಳಗೊಂಡಂತೆ ಮೇ 29ರಂದು ಸಾರ್ವತ್ರಿಕ ರಜೆಯನ್ನು ಘೋಷಣೆ ಮಾಡಲಾಗಿದೆ.

## ನೆಲಮಂಗಲ ಪುರಸಭೆ ಸೊರಬ ಪ.ಪಂಗೆ ಜೂ. 1ಕ್ಕೆ ಚುನಾವಣೆ



ಬೆಂಗಳೂರು: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಪುರಸಭೆ ಮತ್ತು ಶಿವಮೊಗ್ಗ ಜಿಲ್ಲೆಯ ಸೊರಬ ಪಟ್ಟಣ ಪಂಚಾಯಿತಿಗೆ ಜೂ. 1ರಂದು ಚುನಾವಣೆಯನ್ನು ನಡೆಸಲು ರಾಜ್ಯ ಚುನಾವಣಾ ಆಯೋಗ ಸೂಚಿಸಿದೆ.

ಮತದಾರರಿಗೆ ಮತದಾನ ಮಾಡಲು ಅವಕಾಶವಾಗುವಂತೆ, ಸಾರ್ವತ್ರಿಕ ಚುನಾವಣೆ ನಡೆಯುವ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಸೇರಿದಂತೆ ಜೂ.1ರಂದು ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಈ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಎಲ್ಲಾ ಸಾರ್ವಜನಿಕ ಉದ್ದಿಮೆಗಳು, ವ್ಯವಹಾರಿಕ ಸಂಸ್ಥೆಗಳು, ಖಾಸಗಿ ಕಂಪನಿಗಳು ಮತ್ತು ಇನ್ನಿತರ ಸಂಸ್ಥೆಗಳಲ್ಲಿ ಕಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡಲು ಈ ಮೂಲಕ ಆದೇಶಿಸಿದೆ.

1